**Akashvani : Bangalore**
**Regional Bulletin In Kannada**
**27.12.2024 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**೧. ರಾಷ್ಟ್ರಪತಿ ಸೇರಿದಂತೆ ಪ್ರಮುಖ ಗಣ್ಯರಿಂದ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ಅಂತಿಮ ದರ್ಶನ**

**೨. ಮನಮೋಹನ್ ಸಿಂಗ್ ನಿಧನ ಹಿನ್ನೆಲೆ ರಾಜ್ಯದಲ್ಲಿ ೭ ದಿನ ಶೋಕಾಚರಣೆ**

**೩. ಬೆಳಗಾವಿಯಲ್ಲಿ ಮುಖ್ಯಮಂತ್ರಿ ಸೇರಿದಂತೆ ಹಲವು ಗಣ್ಯರಿಂದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಕೆ**

**೪. ಇದೇ ೨೯ ರಂದು ಆಕಾಶವಾಣಿಯಲ್ಲಿ ಪ್ರಧಾನಿ ಮೋದಿ ಅವರಿಂದ 'ಮನ್ ಕಿ ಬಾತ್' ಕಾರ್ಯಕ್ರಮ**

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರಿಗೆ ಅವರ ನವದೆಹಲಿಯ ನಿವಾಸದಲ್ಲಿ ಅಂತಿಮ ಗೌರವ ನಮನ ಸಲ್ಲಿಸಿದರು. ಅವರೊಂದಿಗೆ ಕೇಂದ್ರ ಸಚಿವರಾದ ಅಮಿತ್ ಶಾ, ಜೆ.ಪಿ.ನಡ್ಡ, ಜ್ಯೋತಿರಾಧಿತ್ಯ ಸಿಂಧಿಯಾ, ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾಗಾಂಧಿ ಸೇರಿದಂತೆ ಮತ್ತಿತರ ನಾಯಕರು ಡಾ.ಸಿಂಗ್ ಅವರಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ವಿಡಿಯೊ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ನಿಧನದಿಂದ ದುಃಖವಾಗಿದೆ. ಎದುರಾಗುವ ಅಡೆತಡೆಗಳನ್ನು ಮೀರಿ ಹೆಚ್ಚಿನ ಸಾಧನೆಯನ್ನು ಹೇಗೆ ಮಾಡುವುದು ಎಂಬುದನ್ನು ತಮ್ಮ ಜೀವನದ ಮೂಲಕ ಮುಂದಿನ ಪೀಳಿಗೆಗೆ ಡಾ.ಮನಮೋಹನ್ ಸಿಂಗ್ ತೋರಿಸಿಕೊಟ್ಟಿದ್ದಾರೆ. ಒಬ್ಬ ಅದ್ಭುತ ಅರ್ಥಶಾಸ್ತ್ರಜ್ಞ ಮತ್ತು ನಾಯಕ ಎಂಬುದರ ಜೊತೆಗೆ ಅವರೊಬ್ಬ ಪ್ರಾಮಾಣಿಕ ಮನುಷ್ಯ ಎಂದು ಅವರನ್ನು ದೇಶ ಎಂದೆಂದಿಗೂ ಸ್ಮರಿಸಲಿದೆ ಎಂದಿದ್ದಾರೆ.

**<><*<><>*><>**

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿನ್ನೆ ರಾತ್ರಿ ನವದೆಹಲಿಯಲ್ಲಿ ನಿಧನರಾಗಿದ್ದಾರೆ. ಅವರಿಗೆ ೯೨ ವರ್ಷ ವಯಸ್ಸಾಗಿತ್ತು. ಡಾ. ಮನಮೋಹನ್ ಸಿಂಗ್ ಅವರು ದೆಹಲಿಯ ಏಮ್ಸ್‌ನಲ್ಲಿ ಕೊನೆಯುಸಿರೆಳೆದರು. ವಯೋಸಹಜ ಕಾಯಿಲೆಯ ಪರಿಣಾಮ ತೀವ್ರ ಉಸಿರಾಟದ ಸಮಸ್ಯೆಯಿಂದಾಗಿ ನಿನ್ನೆ ಸಂಜೆ ಮನೆಯಲ್ಲಿ ಹಠಾತ್ ಪ್ರಜ್ಞೆ ಕಳೆದುಕೊಂಡು ಗಂಭೀರ ಸ್ಥಿತಿಯಲ್ಲಿದ್ದ ಅವರನ್ನು ರಾತ್ರಿ ೮ ಗಂಟೆ ಸುಮಾರಿಗೆ ಏಮ್ಸ್‌ನ ತುರ್ತು ಚಿಕಿತ್ಸಾ ವಿಭಾಗಕ್ಕೆ ದಾಖಲಿಸಲಾಯಿತು. ರಾತ್ರಿ ೯.೫೧ ಕ್ಕೆ ನಿಧನರಾದ ಅವರನ್ನು ಎಲ್ಲಾ ಪ್ರಯತ್ನಗಳ ಹೊರತಾಗಿಯೂ, ಉಳಿಸಲು ಸಾಧ್ಯವಾಗಲಿಲ್ಲ ಎಂದು ಏಮ್ಸ್, ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಕಳೆದ ಕೆಲವು ತಿಂಗಳುಗಳಿಂದ ಡಾ.ಸಿಂಗ್ ಅವರ ಆರೋಗ್ಯ ಹದಗೆಟ್ಟಿತ್ತು. ಅವರು ಪತ್ನಿ ಗುರುಶರಣ್ ಕೌರ್ ಮತ್ತು ಮೂವರು ಪುತ್ರಿಯರನ್ನು ಅಗಲಿದ್ದಾರೆ. ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನದ ಗೌರವಾರ್ಥ ಏಳು ದಿನಗಳ ರಾಷ್ಟ್ರೀಯ ಶೋಕಾಚರಣೆಯನ್ನು ಘೋಷಿಸಲಾಗಿದೆ. ಇಂದು ನಡೆಯಬೇಕಿದ್ದ ಎಲ್ಲಾ ಸರ್ಕಾರಿ ಕಾರ್ಯಕ್ರಮಗಳನ್ನು ರದ್ದುಗೊಳಿಸಲಾಗಿದೆ ಎಂದು ಮೂಲಗಳು ಖಚಿತಪಡಿಸಿವೆ.

**<><*<><>*><>**

ಡಾಕ್ಟರ್ ಮನಮೋಹನ ಸಿಂಗ್ ಅವರ, ನಿಧನ ಕಾರಣ ಇಂದು ಶಾಲಾ ಕಾಲೇಜು ಸೇರಿದಂತೆ ಸರ್ಕಾರಿ ರಜೆಯನ್ನು ಸರ್ಕಾರ ಘೋಷಿಸಿದೆ. ೭ ದಿನಗಳ ವರೆಗೆ ರಾಜ್ಯದಲ್ಲಿ ಶೋಕಾಚರಣೆ ನಡೆಸಲಾಗುವುದು ಎಂದು ಡಿ.ಕೆ. ಶಿವಕುಮಾರ ತಿಳಿಸಿದ್ದಾರೆ. ಮಾಜಿ ಪ್ರಧಾನಿ, ಶ್ರೇಷ್ಠ ಆರ್ಥಿಕ ತಜ್ಞ, ಜನಪರ ಯೋಜನೆಗಳ ಹರಿಕಾರ ಡಾಕ್ಟರ್ ಮನಮೋಹನ ಸಿಂಗ್ ಅವರ ನಿಧನದ ಕಾರಣ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ನಿಮಿತ್ತ ಬೆಳಗಾವಿಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿದ ಸರ್ಕಾರಿ ಕಾರ್ಯಕ್ರಮ ಹಾಗೂ ಕಾಂಗ್ರೆಸ್ ಪಕ್ಷದ ಸಮಾವೇಶವನ್ನು ರದ್ದುಗೊಳಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ರಾತ್ರಿ ೧೧ ಗಂಟೆಗೆ ನಡೆಸಿದ ತುರ್ತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯಲ್ಲಿ ಆಯೋಜಿಸದ ಕಾರ್ಯಕ್ರಮಗಳನ್ನು ಮುಂದೆ ನಡೆಸುವ ಬಗ್ಗೆ ಪಕ್ಷದ ವರಿಷ್ಠರೊಂದಿಗೆ ಸಮಾಲೋಚಿಸಿ ತಿಳಿಸಲಾಗುವುದು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

**<><*<><>*><>**

ದೇಶ ಕಂಡ ಅತೀ ಶ್ರೇಷ್ಠ ಆರ್ಥಿಕ ತಜ್ಞ, ಆರ್ಥಿಕ ಉದಾರೀಕರಣದ ಹರಿಕಾರ, ಜನಪರ ನೂತನ ಅಭಿವೃದ್ಧಿ ಯೋಜನೆಗಳನ್ನು ಪರಿಚಯಿಸಿ ಅನುಷ್ಠಾನಗೊಳಿಸಿದ ದೀಮಂತ ಮಾಜಿ ಪ್ರಧಾನಿ ಡಾ.ಮನಮೋಹನ ಸಿಂಗ್ ನಿಧನದ ಹಿನ್ನೆಲೆಯಲ್ಲಿ ಇಂದು ಬೆಳಗಾವಿಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮ ಜರುಗಿತು. ಗಾಂಧೀ ಭಾರತ ಕಾರ್ಯಕ್ರಮ ನಿಮಿತ್ತ ಆಯೋಜಿಸಲಾದ ಕಾಂಗ್ರೆಸ್ ಸಮಾವೇಶವನ್ನು ರದ್ದುಗೊಳಿಸಿ, ಅದೇ ವೇದಿಕೆಯ ಮೇಲೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಂತರ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಡಾ. ಮನಮೋಹನ್ ಸಿಂಗ್ ಅವರು ಜಗತ್ತಿನ ಶ್ರೇಷ್ಠ ಆರ್ಥಿಕ ತಜ್ಞರಲ್ಲಿ ಒಬ್ಬರಾಗಿದ್ದರು, ತುಂಬಾ ಸರಳಜೀವಿ ಪ್ರಾಮಾಣಿಕ ಪ್ರಧಾನಿ, ಜಗತ್ತಿನ ಆರ್ಥಿಕ ಪರಿಸ್ಥಿತಿಯನ್ನು ಗಮನಿದಲ್ಲಿಟ್ಟುಕೊಂಡು ದೇಶದ ಆರ್ಥಿಕ ಪರಿಸ್ಥಿತಿ ನಿಭಾಯಿಸಿದವರು ಎಂದರು. ನರೆಗಾ, ಆಹಾರ ಭದ್ರತೆ, ಮಾಹಿತಿ ಹಕ್ಕು, ಶೈಕ್ಷಣಿಕ ಹಕ್ಕು ಸೇರಿದಂತೆ ಅನೇಕ ಜನಪರ ಯೋಜನೆಗಳ ಮೂಲಕ ಸಂವಿಧಾನದ ರಾಜನೀತಿ ನಿರ್ದೇಶಕ ತತ್ವಗಳನ್ನು ಅಕ್ಷರಷಃ ಜಾರಿಗೊಳಿಸಿ, ಇವುಗಳನ್ನು ಮೂಲಭೂತ ಹಕ್ಕಗಳನ್ನಾಗಿ ಬಡವರ, ದುರ್ಬಲ ವರ್ಗವನ್ನು ಮೇಲಕ್ಕೆತ್ತಲು ಶ್ರಮಿಸಿದವರು. ಸರಳ, ಸಜ್ಜನ, ಸಂಯಮಿ ದೇಶ ಕಂಡ ಶ್ರೇಷ್ಠ ನಾಯಕನನ್ನು ಕಳೆದುಕೊಂಡಿದ್ದೇವೆ ಎಂದು ಕಂಬನಿ ಮಿಡಿದರು. ದೇಶ ಕಂಡ ಅತೀ ಶ್ರೇಷ್ಠ ಆರ್ಥಿಕ ತಜ್ಞ, ಆರ್ಥಿಕ ಉದಾರೀಕರಣದ ಹರಿಕಾರ, ಜನಪರ ನೂತನ ಅಭಿವೃದ್ಧಿ ಯೋಜನೆಗಳನ್ನು ಪರಿಚಯಿಸಿ ಅನುಷ್ಠಾನಗೊಳಿಸಿದ ದೀಮಂತ ಮಾಜಿ ಪ್ರಧಾನಿ ಡಾ.ಮನಮೋಹನ ಸಿಂಗ್ ನಿಧನದ ಹಿನ್ನೆಲೆಯಲ್ಲಿ ಇಂದು ಬೆಳಗಾವಿಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮ ಜರುಗಿತು. ಗಾಂಧೀ ಭಾರತ ಕಾರ್ಯಕ್ರಮ ನಿಮಿತ್ತ ಆಯೋಜಿಸಲಾದ ಕಾಂಗ್ರೆಸ್ ಸಮಾವೇಶವನ್ನು ರದ್ದುಗೊಳಿಸಿ, ಅದೇ ವೇದಿಕೆಯ ಮೇಲೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಂತರ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಡಾ. ಮನಮೋಹನ್ ಸಿಂಗ್ ಅವರು ಜಗತ್ತಿನ ಶ್ರೇಷ್ಠ ಆರ್ಥಿಕ ತಜ್ಞರಲ್ಲಿ ಒಬ್ಬರಾಗಿದ್ದರು, ತುಂಬಾ ಸರಳಜೀವಿ ಪ್ರಾಮಾಣಿಕ ಪ್ರಧಾನಿ, ಜಗತ್ತಿನ ಆರ್ಥಿಕ ಪರಿಸ್ಥಿತಿಯನ್ನು ಗಮನಿದಲ್ಲಿಟ್ಟುಕೊಂಡು ದೇಶದ ಆರ್ಥಿಕ ಪರಿಸ್ಥಿತಿ ನಿಭಾಯಿಸಿದವರು ಎಂದರು.

ನರೆಗಾ, ಆಹಾರ ಭದ್ರತೆ, ಮಾಹಿತಿ ಹಕ್ಕು, ಶೈಕ್ಷಣಿಕ ಹಕ್ಕು ಸೇರಿದಂತೆ ಅನೇಕ ಜನಪರ ಯೋಜನೆಗಳ ಮೂಲಕ ಸಂವಿಧಾನದ ರಾಜನೀತಿ ನಿರ್ದೇಶಕ ತತ್ವಗಳನ್ನು ಅಕ್ಷರಷಃ ಜಾರಿಗೊಳಿಸಿ, ಇವುಗಳನ್ನು ಮೂಲಭೂತ ಹಕ್ಕಗಳನ್ನಾಗಿ ಬಡವರ, ದುರ್ಬಲ ವರ್ಗವನ್ನು ಮೇಲಕ್ಕೆತ್ತಲು ಶ್ರಮಿಸಿದವರು. ಸರಳ, ಸಜ್ಜನ, ಸಂಯಮಿ ದೇಶ ಕಂಡ ಶ್ರೇಷ್ಠ ನಾಯಕನನ್ನು ಕಳೆದುಕೊಂಡಿದ್ದೇವೆ ಎಂದು ಕಂಬನಿ ಮಿಡಿದರು.

<><*<><>*><>

ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಮೊಬೈಲ್ ರಿಪೇರಿ ಮತ್ತು ಸೇವೆ ಕುರಿತ ೩೦ ದಿನಗಳ ಉಚಿತ ತರಬೇತಿಯು ಜನವರಿ ೦೩ ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಇದೇ ಡಿಸೆಂಬರ್ ೩೧ ಕೊನೆಯ ದಿನವಾಗಿದ್ದು, ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದೆ. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

<><*<><>*><>

ಮಹಿಳೆಯರು ಸಬಲರಾಗಿ, ಸ್ವಾವಲಂಬಿ ಹಾಗೂ ಸಶಕ್ತ ಜೀವನ ನಡೆಸಲು ಸ್ವ ಉದ್ಯೋಗಿಗಳಾಗಬೇಕು ಎಂದು ಧಾರವಾಡ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸ್ವರೂಪಾ ಟಿ.ಕೆ ಹೇಳಿದ್ದಾರೆ. ಧಾರವಾಡ ತಾಲೂಕಿನ ಮುಮ್ಮಿಗಟ್ಟಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ, ರಾಜ್ಯ ಜೀವನೋಪಾಯ ಅಭಿಯಾನ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ ಜಲ್ ಜೀವನ್ ಮಿಷನ್, ನಲ್ ಜಲ್ ಮಿತ್ರ ಕೌಶಲ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸ್ವ-ಸಹಾಯ ಸಂಘಗಳ ಮಹಿಳಾ ಫಲಾನುಭವಿಗಳು ನೀರು ವಿತರಣಾ ನಿರ್ವಹಣೆ ಕುರಿತ ತರಬೇತಿ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

<><*<><>*><>

ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ್ ಸಿಂಗ್ ರವರ ನಿಧನಕ್ಕೆ ಆಹಾರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಸಂತಾಪ ಸೂಚಿಸಿದ್ದಾರೆ. ಸರಳ ಸಜ್ಜನಿಕೆ ರಾಜಕಾರಣಿ ಸುದ್ದಿ ತೀವ್ರ ನೋವನ್ನುಂಟು ಮಾಡಿದೆ. ಇಲಾಖೆಯ ಯಾವುದೇ ವಿಷಯಗಳಿರಲಿ ಅವರು ಸ್ಪಂದಿಸಿ ಕೆಲಸಕ್ಕೆ ಸ್ಪೂರ್ತಿ ನೀಡುತ್ತಿದ್ದರು. ಪಿ.ವಿ.ನರಸಿಂಹರಾವ್ ರವರು ಪ್ರಧಾನಿಯಾಗಿದ್ದಾಗ ಅವರು ಹಣಕಾಸು ಸಚಿವರಾಗಿ ಈ ದೇಶಕ್ಕೆ ತನ್ನದೆ ಆದ ಶೈಲಿಯಲ್ಲಿ

ಅಭಿವೃದ್ಧಿ ಪಥದತ್ತ ಕೊಂಡೊಯ್ದಿದ್ದರು. ನ್ಯಾಷನಲ್ ಫುಡ್ ಸೆಕ್ಯೂರಿಟಿ ಆಕ್ಟ್, ಮನ್ರೇಗಾ, ಮೊದಲಾದ ಕಾರ್ಯಕ್ರಮಗಳ ಮೂಲಕ ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಒತ್ತನ್ನು ನೀಡಿದ್ದರು ಎಂದು ಸ್ಮರಿಸಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ೨೯ ರಂದು ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೭ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ. ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

**<><*<><>*><>**

ದೇಶಕ್ಕೆ ಆರ್ಥಿಕ ಶಿಸ್ತನ್ನು ತಂದವರು ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ಅಗಲಿಕೆ ದೇಶಕ್ಕೆ ತುಂಬಲಾಗದ ನಷ್ಟ ಉಂಟಾಗಿದೆ ಎಂದು ಶಿವಮೊಗ್ಗ ನಗರ ಶಾಸಕ ಚೆನ್ನಬಸಪ್ಪ ತಿಳಿಸಿದರು. ದೇಶದ ಆರ್ಥಿಕ ತಜ್ಞ, ಮಾಜಿ ಪ್ರಧಾನ ಮಂತ್ರಿ ಮನಮೋಹನ್ ಸಿಂಗ್ ರವರ ನಿಧನಕ್ಕೆ ಜಿಲ್ಲಾ ಕಾಂಗ್ರೆಸ್ ವತಿಯಿಂದ ಸಂತಾಪ ಸೂಚಿಸಲಾಯಿತು. ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ನಡೆದ ಸಂತಾಪ ಸಭೆಯಲ್ಲಿ ಮನಮೋಹನ್ ಸಿಂಗ್ ರವರ ಭಾವಚಿತ್ರಕ್ಕೆ ಜಿಲ್ಲಾ ಕಾಂಗ್ರೆಸ್‌ನ ಮುಖಂಡರುಗಳು ಪುಷ್ಪ ನಮನ ಸಲ್ಲಿಸಿದರು. ನಂತರ ಅವರು ದೇಶಕ್ಕೆ ನೀಡಿದ ಕೂಡುಗೆಗಳನ್ನು ಸ್ಮರಿಸಲಾಯಿತು. ದೇಶದ ಆರ್ಥಿಕತೆಗೆ ಅವರು ನೀಡಿದ ಸಹಕಾರದಿಂದ ದೇಶ ಇಂದು ಸಧೃಡವಾಗಿ ಮುನ್ನಡೆಯುತ್ತಿರುವ ಕುರಿತು ನೆನಪಿಕೊಳ್ಳಲಾಯಿತು.

**<><*<><>*><>**

ದಾವಣಗೆರೆಯ ೧೯ ಕೇಂದ್ರಗಳಲ್ಲಿ ಇದೇ ೨೯ ರಂದು ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ ೨೦೨೩-೨೪ ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್‌ನ ಎ ಮತ್ತು ಬಿ ವೃಂದದ ಹುದ್ದೆಗಳ ಪೂರ್ವಭಾವಿ ಮರು ಪರೀಕ್ಷೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ಮರು ಪರೀಕ್ಷೆಯ ಸಿದ್ಧತಾ ಸಭೆ ಹಾಗೂ ಪರೀಕ್ಷಾ ಕೇಂದ್ರಗಳ ಪರಿವೀಕ್ಷಕರು, ಮಾರ್ಗಾಧಿಕಾರಿಗಳು ಮತ್ತು ವೀಕ್ಷಕರಿಗೆ ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ಮತ್ತು ಯಾವುದೇ ದೂರುಗಳು ಬಾರದಂತೆ ನಡೆಸಲು ಆಯೋಗದ ನಿರ್ದೇಶನಗಳನ್ನು ಪಾಲಿಸಬೇಕು ಎಂದರು. ಪರೀಕ್ಷಾ ಕೇಂದ್ರಗಳಲ್ಲಿ ಸ್ವಚ್ಛತೆ, ಆಸನದ ವ್ಯವಸ್ಥೆ, ಬಂದೋಬಸ್ತ್ ಸೇರಿದಂತೆ ಎಲ್ಲವನ್ನೂ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸೂಚಿಸಿದರು.

**<><*<><>*><>**

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನಕ್ಕೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸಂತಾಪ ವ್ಯಕ್ತಪಡಿಸಿದ್ದಾರೆ. ಅವರು ತಮ್ಮ ಶೋಕ ಸಂದೇಶದಲ್ಲಿ, ಮಾಜಿ ಪ್ರಧಾನಿ ದೇಶ ಕಂಡ ಮಹಾನ್ ಆರ್ಥಿಕ ತಜ್ಞ ಡಾ. ಮನಮೋಹನ್ ಸಿಂಗ್ ರವರ ನಿಧನದ ಸುದ್ದಿ ಆಘಾತ ನೀಡಿದೆ. ದೇಶದ ಆರ್ಥಿಕತೆಗೆ ಹಾಗೂ ಪ್ರಗತಿಗೆ ಡಾ. ಮನಮೋಹನ್ ಸಿಂಗ್ ರವರು ನೀಡಿದ್ದ ಕೊಡುಗೆ ಅನನ್ಯವಾಗಿದ್ದು, ಅವರ ಆತ್ಮಕ್ಕೆ ಶಾಂತಿ ಕರುಣಿಸಲೆಂದು ಹಾಗೂ ಕುಟುಂಬಸ್ಥರಿಗೆ, ಅಭಿಮಾನಿಗಳಿಗೆ ನೋವನ್ನು ಭರಿಸುವ ಶಕ್ತಿ ನೀಡಲೆಂದು,ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**